ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ಉತ್ತರಗಳು

ಶ್ರೀ ಕೆ.ಹೆಚ್. ರಂಗನಾಥ್ (ಅರಣ್ಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 29ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ ಒಟ್ಟು 112 ಪ್ರಶ್ನೆಗಳ ಪೈಕಿ 76 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಉತ್ತರಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಬಗರ್‌ಹುಕುಂ ಸಕ್ರಮೀಕರಣ ಸಮಿತಿ ಹಾಗೂ ಭೂ ನ್ಯಾಯಮಂಡಳಿ ರಚನೆ

2970 - ಶ್ರೀ ಆಶೋಕ್ ಆರ್. (ಉತ್ತರಹಳ್ಳಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಉತ್ತರಹಳ್ಳಿ ವಿಧಾನಸಭಾ ಕ್ಷೇತ್ರದ ವಾಪ್ತಿಯಲ್ಲಿ ಬಗರ್‌ಹುಕುಂ ಸಕ್ರಮೀಕರಣ ಸಮಿತಿ, ಭೂ ನ್ಯಾಯ ಮಂಡಳಿ ಈವರೆಗೆ ರಚನೆಯಗಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಈ ಸಮಿತಿಗಳನ್ನು ರಚಿಸದೇ ಇರಲು ಕಾರಣಗಳೇನು?

3) ಈ ಸಮಿತಿ ಯಾವಾಗ ರಚನೆ ಮಾಡಲಾಗುವುದು?

ಶ್ರೀ ಹೆಚ್. ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

1) . ಬಂದಿದೆ.

2) ಬೆಂಗಳೂರು ದಕ್ಷಿಣ ತಾಲ್ಲೂಕಿನ ಬಗರ್ ಹುಕುಂ ಸಾಗುವಳಿ ಸಮಿತಿಯನ್ನು ರಚಿಸಲು ಈಗಾಗಲೇ ಕ್ರಮ ಕೈಗೊಂಡಿದೆ. ಪ್ರಕರಣ ಒಂದರಲ್ಲಿ ಮಾನ್ಯ ಉಚ್ಚನ್ಯಾಯಾಲಯ ನೀಡಿದ ತೀರ್ಪಿನಂತೆ ಭೂ ನ್ಯಾಯ ಮಂಡಳಿಗೆ ಸದಸ್ಯರಾಗ ಬಯಸುವವರಿಗೆ ಕನಿಷ್ಟ ವಿದ್ಯಾರ್ಹತೆ ಅಂದರೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ 8ನೇ ತರಗತಿ ಹಾಗೂ ಇತರರಿಗೆ 12ನೇ ತರಗತಿ ನಿಗದಿಪಡಿಸಲು ಸ್ವಲ್ಪ ಸಮಯ ತೆಗೆದುಕೊಂಡಿತು. ಈಗ ಅದು ಪೂರ್ಣಗೊಂಡಿದು, ಈಗ ಭೂ ನ್ಯಾಯ ಮಂಡಳಿಗಳನ್ನು ಪುನರ್ ರಚನೆ ಮಾಡಲಾಗುತ್ತಿದೆ.

3) ಅದೇ-

ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ರೈತರಿಗೆ ಸಬ್ಸಿಡಿ ದರದಲ್ಲಿ ರಸಗೊಬ್ಬರ ವಿತರಣೆ

2972 - ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೈತರು ಉಪಯೋಗಿಸುತ್ತಿರುವ ರಸಗೊಬ್ಬರಕ್ಕೆ ಕೇಂದ್ರ ಸರ್ಕಾರದಿಂದ ಹಾಗೂ ರಾಜ್ಯ ಸರ್ಕಾರದಿಂದ ರಿಯಾಯಿತಿ (ಸಬ್ಸಿಡಿ) ದರವೆಷ್ಟು?